**All India Radio: Bangalore**
**National Bulletin In Kannada**
**09.02.2026  1.10  pm**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**09.02.2026  1.10  pm**

**<>><><*><><<>**

ಮುಖ್ಯಾಂಶಗಳು

**೧. ಪರೀಕ್ಷಾ ಪೇ ಚರ್ಚೆ ; ಒತ್ತಡ, ಆತಂಕ ನಿವಾರಣೆಗಾಗಿ ವಿದ್ಯಾರ್ಥಿಗಳಿಗೆ ಪ್ರಧಾನಿ ನರೇಂದ್ರ ಮೋದಿ ಸಲಹೆ**

**೨. ಸೀಶೆಲ್ಸ್ ಅಧ್ಯಕ್ಷರೊಂದಿಗೆ ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ದ್ವಿಪಕ್ಷೀಯ ಮಾತುಕತೆ**

**೩. ರಾಷ್ಟ್ರೀಯ ಭದ್ರತೆ, ಕಾನೂನು ಜಾರಿ ವಿಷಯದಲ್ಲಿ ಪರಸ್ಪರ ಸಹಕಾರಕ್ಕಾಗಿ ಭಾರತ-ಕೆನಡಾ ಒಪ್ಪಿಗೆ**

**೪. ಹತ್ತೊಂಬತ್ತು ವರ್ಷದೊಳಗಿನ ವಿಶ್ವಕಪ್ ಕ್ರಿಕೆಟ್ ವಿಜೇತ ಭಾರತ ತಂಡಕ್ಕೆ ಉಭಯ ಸದನಗಳಲ್ಲಿ ಅಭಿನಂದನೆ**

**<>><><*><><<>**

ಪರೀಕ್ಷಾ ಪೇ ಚರ್ಚೆಯ ೯ನೇ ಆವೃತ್ತಿಯಲ್ಲಿ ಪ್ರಧಾನಿ ನರೇಂದ್ರ ಮೋದಿಯವರು ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು. ಇಂದಿನಿಂದ ೨ನೇ ಸಂಚಿಕೆಯಲ್ಲಿ ಪ್ರಧಾನಿಯವರು, ಒತ್ತಡ ಮತ್ತು ಆತಂಕವನ್ನು ನಿವಾರಿಸುವುದು ಹೇಗೆ ಎಂಬುದರ ಕುರಿತು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು. ವಿದ್ಯಾರ್ಥಿಗಳು ಸಣ್ಣ ನವೋದ್ಯಮಗಳೊಂದಿಗೆ ತಮ್ಮ ಉದ್ಯಮಶೀಲ ಪ್ರಯಾಣ ಪ್ರಾರಂಭಿಸುವಂತೆ ಪ್ರೋತ್ಸಾಹಿಸಿದರು. ದೊಡ್ಡ ಕೆಲಸಗಳು ಸಾಮಾನ್ಯವಾಗಿ ಚಿಕ್ಕ ಆರಂಭದಿಂದ ಬೆಳೆಯುತ್ತದೆ ಎಂದು ಅವರು ಹೇಳಿದರು. ವಿದ್ಯಾರ್ಥಿಗಳು ಶೈಕ್ಷಣಿಕ ಮತ್ತು ಸೃಜನಶೀಲ ಅನ್ವೇಷಣೆಗಳನ್ನು ಪ್ರತ್ಯೇಕವಾಗಿ ನೋಡಬಾರದು, ಎರಡೂ ಸಮಾನವಾಗಿ ಮೌಲ್ಯಯುತವಾಗಿವೆ. ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಒತ್ತಡದಿಂದ ಉಂಟಾಗುವ ಆಯಾಸವನ್ನು ನಿವಾರಿಸಲು ಕಲೆ ಮತ್ತು ಸೃಜನಶೀಲ ಹವ್ಯಾಸಗಳು ಸಹಾಯ ಮಾಡುತ್ತವೆ ಎಂದು ಸಲಹೆ ನೀಡಿದರು. ರಸ್ತೆಗಳಲ್ಲಿ ಕಸ ಹಾಕದಿರುವುದು, ಉಗುಳದಿರುವುದು, ಸಂಚಾರ ನಿಯಮವನ್ನು ಪಾಲಿಸುವುದು ಮತ್ತು ಆಹಾರ ವ್ಯರ್ಥ ಮಾಡುವುದನ್ನು ತಪ್ಪಿಸುವುದು ಮುಂತಾದ ಮೂಲಭೂತ ನಿಯಮಗಳನ್ನು ಪಾಲಿಸುವಂತೆ ಅವರು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ಭಾರತೀಯ ನಿರ್ಮಿತ ಉತ್ಪನ್ನಗಳನ್ನು ಆಯ್ಕೆ ಮಾಡುವುದರಿಂದ ದೇಶೀಯ ಆರ್ಥಿಕತೆ ಬಲಗೊಳ್ಳುತ್ತದೆ. ನಾಗರಿಕರು ತೆಗೆದುಕೊಳ್ಳುವ ಪ್ರತಿಯೊಂದು ಸಣ್ಣ ಹೆಜ್ಜೆಯು ೨೦೪೭ರ ವೇಳೆಗೆ ವಿಕಸಿತ ಭಾರತದ ಗುರಿ ಸಾಧಿಸಲು ಸಹಾಯ ಮಾಡುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

**ಧ್ವನಿ: ಪ್ರಧಾನಿ ನರೇಂದ್ರ ಮೋದಿ ( ೨೨ ಸೆಕೆಂಡ್ಸ್)**

ವಿದ್ಯಾರ್ಥಿಗಳು ಅರಿವು ಮತ್ತು ಜವಾಬ್ದಾರಿಯೊಂದಿಗೆ ತಂತ್ರಜ್ಞಾನವನ್ನು ಬಳಸಬೇಕು. ಕಲಿಕೆ, ನಾವೀನ್ಯತೆ ಮತ್ತು ಬೆಳವಣಿಗೆಗೆ ಸಾಧನವಾಗಿ ತಂತ್ರಜ್ಞಾನವನ್ನು ಬಳಸಬೇಕು ಎಂದು ಅವರು ಸಲಹೆ ನೀಡಿದರು. ಪರೀಕ್ಷಾ ಪೆ ಚರ್ಚೆಯಲ್ಲಿ ತಮಿಳುನಾಡಿನ ಕೊಯಮತ್ತೂರು, ಛತ್ತೀಸ್‌ಗಢದ ರಾಯ್‌ಪುರ, ಗುಜರಾತ್‌ನ ದೇವ್ ಮೋಗ್ರಾ ಮತ್ತು ಅಸ್ಸಾಂನ ಗುವಾಹಟಿಯ ವಿದ್ಯಾರ್ಥಿಗಳು ಭಾಗವಹಿಸಿದ್ದರು.

**<>><><*><><<>**

ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಅವರು ನವದೆಹಲಿಯಲ್ಲಿ ಇಂದು ಸೀಶೆಲ್ಸ್ ಅಧ್ಯಕ್ಷ ಡಾ.ಪ್ಯಾಟ್ರಿಕ್ ಹರ್ಮಿನಿ ಅವರನ್ನು ಭೇಟಿಯಾಗಿ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಕಡಲ ನೆರೆಯ ರಾಷ್ಟ್ರಗಳಾಗಿ, ಈ ಪ್ರದೇಶದಲ್ಲಿ ಆರ್ಥಿಕ ಸಮೃದ್ಧಿ ಮತ್ತು ಭದ್ರತೆಗಾಗಿ 'ಮಹಾಸಾಗರ'ದ ದೃಷ್ಟಿಕೋನವನ್ನು ಮುನ್ನಡೆಸುವ ನಿಟ್ಟಿನಲ್ಲಿ ಸೀಶೆಲ್ಸ್ ಬೆಂಬಲವನ್ನು ಭಾರತ ಗೌರವಿಸುತ್ತದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಸಚಿವ ಡಾ.ಎಸ್.ಜೈಶಂಕರ್ ಹೇಳಿದ್ದಾರೆ. ಇದಕ್ಕೂ ಮುನ್ನ ಸೀಶೆಲ್ಸ್ ಅಧ್ಯಕ್ಷ ಡಾ.ಪ್ಯಾಟ್ರಿಕ್ ಹರ್ಮಿನಿ ಅವರು, ನವದೆಹಲಿಯ ರಾಜ್‌ಘಾಟ್‌ಗೆ ತೆರಳಿ ಮಹಾತ್ಮಾಗಾಂಧಿಯವರ ಸಮಾಧಿಗೆ ಪುಷ್ಪ ನಮನ ಸಲ್ಲಿಸಿ, ಮಹಾತ್ಮಾ ಗಾಂಧೀಜಿಯವರ ಆದರ್ಶಗಳನ್ನು ಸ್ಮರಿಸಿದರು.

**<>><><*><><<>**

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ನವದೆಹಲಿಯಲ್ಲಿ ಸೀಶೆಲ್ಸ್ ಅಧ್ಯಕ್ಷ ಡಾ. ಪ್ಯಾಟ್ರಿಕ್ ಹರ್ಮಿನಿ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಇಬ್ಬರೂ ನಾಯಕರು ಪರಸ್ಪರ ಆಸಕ್ತಿಯ ದ್ವಿಪಕ್ಷೀಯ, ಪ್ರಾದೇಶಿಕ ಮತ್ತು ಅಂತಾರಾಷ್ಟ್ರೀಯ ವಿಷಯಗಳ ಕುರಿತು ಚರ್ಚೆ ನಡೆಸಲಿದ್ದಾರೆ. ಸೀಶೆಲ್ಸ್ ಅಧ್ಯಕ್ಷರು ಇಂದು ಸಂಜೆ ರಾಷ್ಟ್ರಪತಿ ಭವನದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಲಿದ್ದಾರೆ. ಆರು ದಿನಗಳ ಭಾರತ ಭೇಟಿಯಲ್ಲಿರುವ ಡಾ. ಪ್ಯಾಟ್ರಿಕ್ ಹರ್ಮಿನಿ ಅವರನ್ನು ನಿನ್ನೆ ದೆಹಲಿ ವಿಮಾನ ನಿಲ್ದಾಣದಲ್ಲಿ ಕೇಂದ್ರ ಸಚಿವೆ ಅನುಪ್ರಿಯಾ ಪಟೇಲ್ ಸ್ವಾಗತಿಸಿದರು. ಸೀಶೆಲ್ಸ್ ಹಿಂದೂ ಮಹಾಸಾಗರ ಪ್ರದೇಶದಲ್ಲಿ ಭಾರತಕ್ಕೆ ಪ್ರಮುಖ ನೆರೆಯ ರಾಷ್ಟ್ರವಾಗಿದೆ ಹಾಗೂ ಭಾರತದ ವಿಷನ್ ಮಹಾಸಾಗರ್ ಮತ್ತು ಜಾಗತಿಕ ದಕ್ಷಿಣಕ್ಕೆ ಬದ್ಧತೆಯಲ್ಲಿ ವಿಶೇಷ ಸ್ಥಾನವನ್ನು ಹೊಂದಿದೆ. ಸೀಶೆಲ್ಸ್ ಅಧ್ಯಕ್ಷರ ಭೇಟಿಯು ಭಾರತ ಮತ್ತು ಸೀಶೆಲ್ಸ್ ನಡುವಿನ ರಾಜತಾಂತ್ರಿಕ ಸಂಬಂಧಗಳ ಸ್ಥಾಪನೆಯ ೫೦ನೇ ವಾರ್ಷಿಕೋತ್ಸವದೊಂದಿಗೆ ಹೊಂದಿಕೆಯಾಗುತ್ತದೆ. ನಿನ್ನೆ ನವದೆಹಲಿಗೆ ಬರುವ ಮೊದಲು, ಸೀಶೆಲ್ಸ್ ಅಧ್ಯಕ್ಷರು ಚೆನ್ನೈ ಮತ್ತು ಮುಂಬೈಗೆ ಭೇಟಿ ನೀಡಿದ್ದರು. ಸೀಶೆಲ್ಸ್ ಅಧ್ಯಕ್ಷರ ಭೇಟಿಯು ಎರಡೂ ದೇಶಗಳ ನಡುವಿನ ವ್ಯಾಪಕ ಸಹಕಾರ ಮತ್ತು ಬಲವಾದ ಜನರಿಂದ ಜನರ ನಡುವಿನ ಬಾಂಧವ್ಯಕ್ಕೆ ಮತ್ತಷ್ಟು ವೇಗ ನೀಡುತ್ತದೆ.

<>><><*><><<>

ರಾಜ್ಯ ಜೀವವೈವಿಧ್ಯ ಮಂಡಳಿಗಳು ಮತ್ತು ಕೇಂದ್ರಾಡಳಿತ ಪ್ರದೇಶದ ಜೀವವೈವಿಧ್ಯ ಮಂಡಳಿಗಳ ಮೂಲಕ ಹಕ್ಕುದಾರರಿಗೆ ಪ್ರಯೋಜನವಾಗುವಂತೆ ೪೫ ಲಕ್ಷ ರೂಪಾಯಿಗಳಿಗೂ ಹೆಚ್ಚು ಅನುದಾನವನ್ನು ರಾಷ್ಟ್ರೀಯ ಜೀವವೈವಿಧ್ಯ ಪ್ರಾಧಿಕಾರ-ಎನ್‌ಬಿಎ ವಿತರಿಸಿದೆ. ಇದರಿಂದಾಗಿ ಕರ್ನಾಟಕ, ತೆಲಂಗಾಣ, ಆಂಧ್ರಪ್ರದೇಶ, ಗೋವಾ, ಮಹಾರಾಷ್ಟ್ರ, ಅಸ್ಸಾಂ, ಉತ್ತರ ಪ್ರದೇಶ, ಉತ್ತರಾಖಂಡ, ಹರಿಯಾಣ, ಹಿಮಾಚಲ ಪ್ರದೇಶ, ದೆಹಲಿಯ ರಾಷ್ಟ್ರೀಯ ರಾಜಧಾನಿ ಪ್ರದೇಶ ಮತ್ತು ಲಡಾಖ್ ಸೇರಿದಂತೆ ಹತ್ತು ರಾಜ್ಯಗಳು ಮತ್ತು ಎರಡು ಕೇಂದ್ರಾಡಳಿತ ಪ್ರದೇಶಗಳಾದ್ಯಂತ ತೊಂಬತ್ತಕ್ಕೂ ಹೆಚ್ಚು ಜೀವವೈವಿಧ್ಯ ನಿರ್ವಹಣಾ ಸಮಿತಿಗಳಿಗೆ ಪ್ರಯೋಜನವಾಗಲಿದೆ. ಈ ಜೀವವೈವಿಧ್ಯ ಮಂಡಳಿಗಳು ಗ್ರಾಮೀಣ ಪ್ರದೇಶಗಳು, ನಗರ ಸ್ಥಳೀಯ ಸಂಸ್ಥೆಗಳು, ಮ್ಯಾಂಗ್ರೋವ್ ಪ್ರದೇಶಗಳು ಮತ್ತು ಕೈಗಾರಿಕಾ ಪ್ರದೇಶಗಳು ಸೇರಿದಂತೆ ವೈವಿಧ್ಯಮಯ ಪರಿಸರವನ್ನು ಪ್ರತಿನಿಧಿಸುತ್ತವೆ.

<>><><*><><<>

ರಾಷ್ಟ್ರೀಯ ಭದ್ರತೆ ಮತ್ತು ಕಾನೂನು ಜಾರಿ ವಿಷಯದಲ್ಲಿ ಪರಸ್ಪರ ಸಹಕಾರಕ್ಕಾಗಿ ಮಾರ್ಗದರ್ಶನ ನೀಡಲು ಮತ್ತು ಪ್ರಾಯೋಗಿಕ ಸಹಯೋಗವನ್ನು ಸಕ್ರಿಯಗೊಳಿಸುವ ನಿಟ್ಟಿನಲ್ಲಿ ಕಾರ್ಯ ಯೋಜನೆ ರೂಪಿಸಲು ಭಾರತ ಮತ್ತು ಕೆನಡಾ ಪರಸ್ಪರ ಒಪ್ಪಿಕೊಂಡಿವೆ. ಕೆನಡಾದ ಒಟ್ಟಾವಾದಲ್ಲಿ ಕಳೆದ ಶನಿವಾರ ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಮತ್ತು ಕೆನಾಡದ ರಾಷ್ಟ್ರೀಯ ಭದ್ರತಾ ಸಲಹೆಗಾರ ನಥಾಲಿ ಡ್ರೌಯಿಂಗ್ ನಡುವಿನ ಸಭೆಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಯಿತು. ಸಭೆಯಲ್ಲಿ ಉಭಯ ದೇಶಗಳ ನಾಗರಿಕರ ಸುರಕ್ಷತೆ ಮತ್ತು ಭದ್ರತೆಯನ್ನು ಬೆಂಬಲಿಸುವ ಗುರಿಯನ್ನು ಹೊಂದಿರುವ ಉಪಕ್ರಮಗಳ ಪ್ರಗತಿಯನ್ನು ಪರಿಶೀಲಿಸಲಾಯಿತು ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಭದ್ರತೆ ಮತ್ತು ಕಾನೂನು ಜಾರಿ ಸಂಪರ್ಕಾಧಿಕಾರಿಗಳನ್ನು ಪರಸ್ಪರ ದೇಶಗಳಲ್ಲಿ ನಿಯೋಜಿಸಲಾಗುವುದು. ಈ ಕ್ರಮವು ದ್ವಿಪಕ್ಷೀಯ ಸಂವಹನವನ್ನು ಸುಗಮಗೊಳಿಸಲಿದೆ. ಅಲ್ಲದೇ ಉಭಯ ದೇಶಗಳ ನಡುವೆ ಪರಸ್ಪರ ಕಾಳಜಿಯ ವಿಷಯಗಳ ಬಗ್ಗೆ ಸಮಯೋಚಿತ ಮಾಹಿತಿ ಹಂಚಿಕೊಳ್ಳಲು ಸಹಾಯ ಮಾಡುತ್ತದೆ ಎಂದು ಸಚಿವಾಲಯ ತಿಳಿಸಿದೆ.

<>><><*><><<>

ಕಳೆದ ವಾರ ಜಿಂಬಾಬ್ವೆಯ ಹರಾರೆಯಲ್ಲಿ ನಡೆದ ಫೈನಲ್ ಕ್ರಿಕೆಟ್ ಪಂದ್ಯದಲ್ಲಿ ಇಂಗ್ಲೆಂಡ್ ತಂಡವನ್ನು ಪರಾಭವಗೊಳಿಸುವ ಮೂಲಕ ೨೦೨೬ರ ೧೯ ವರ್ಷದೊಳಗಿನವರ ವಿಶ್ವಕಪ್ ಗೆದ್ದ ಭಾರತೀಯ ಕ್ರಿಕೆಟ್ ತಂಡವನ್ನು ಸಂಸತ್ತಿನ ಉಭಯ ಸದನಗಳು ಅಭಿನಂದಿಸಿವೆ. ಲೋಕಸಭೆಯಲ್ಲಿಂದು ಬೆಳಗ್ಗೆ ೧೧ ಗಂಟೆಗೆ ಸದನ ಸೇರಿದಾಗ ಲೋಕಸಭಾಧ್ಯಕ್ಷ ಓಂ ಬಿರ್ಲಾ, ಭಾರತೀಯ ಆಟಗಾರರು ಪಂದ್ಯಾವಳಿಯಾದ್ಯಂತ ಅನುಕರಣೀಯ ಕೌಶಲ್ಯ, ದೃಢ ನಿಶ್ಚಯ, ಶಿಸ್ತು ಪ್ರದರ್ಶಿಸಿದ್ದಾರೆ. ಅವರ ಸಾಧನೆಯು ದೇಶಾದ್ಯಂತ ಲಕ್ಷಾಂತರ ಯುವಕರಿಗೆ ದೊಡ್ಡ ಕನಸು

ಕಾಣಲು ಮತ್ತು ಕ್ರೀಡೆಯಲ್ಲಿ ಶ್ರೇಷ್ಠತೆಗಾಗಿ ಶ್ರಮಿಸಲು ಸ್ಫೂರ್ತಿ ನೀಡಿದೆ ಎಂದು ಹೇಳಿದರು. ಇನ್ನೊಂದೆಡೆ, ರಾಜ್ಯಸಭೆ ಕೂಡ ವಿಶ್ವಕಪ್ ವಿಜೇತ ೧೯ ವರ್ಷದೊಳಗಿನವರ ಭಾರತ ತಂಡವನ್ನು ಅಭಿನಂದಿಸಿದೆ. ರಾಜ್ಯಸಭೆಯಲ್ಲಿ ಇಂದು ಬೆಳಗ್ಗೆ ೧೧ ಗಂಟೆಗೆ ಸದನ ಸೇರಿದಾಗ ಸಭಾಪತಿ ಸಿ.ಪಿ.ರಾಧಾಕೃಷ್ಣನ್, ಈ ಸಾಧನೆಯು ದೇಶದ ಯುವಕರಲ್ಲಿ ಪ್ರತಿಭೆ, ಬದ್ಧತೆ ಮತ್ತು ಕ್ರೀಡಾಶ್ರೇಷ್ಠತೆಯನ್ನು ಪ್ರತಿಬಿಂಬಿಸುತ್ತದೆ. ಈ ಯಶಸ್ಸಿಗಾಗಿ ಇಡೀ ತಂಡಕ್ಕೆ ಅಭಿನಂದನೆಗಳು ಎಂದು ತಿಳಿಸಿದರು.

**<>><><*><><<>**

ಕೊಲಂಬೊದ ಸಿನ್ಹಳೀಸ್ ಸ್ಪೋರ್ಟ್ಸ್ ಕ್ಲಬ್ ಕ್ರೀಡಾಂಗಣದಲ್ಲಿ ಇಂದು ನಡೆಯುವ ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್ ಪಂದ್ಯಾವಳಿಯ ಬಿ ಗುಂಪಿನ ೮ನೇ ಪಂದ್ಯದಲ್ಲಿಂದು ಜಿಂಬಾಬ್ವೆ ಮತ್ತು ಓಮನ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಮಧ್ಯಾಹ್ನ ೩ ಗಂಟೆಗೆ ಆರಂಭವಾಗಲಿದೆ.

ಇದೇ ವೇಳೆ ಅಹಮದಾಬಾದ್‌ನ ನರೇಂದ್ರ ಮೋದಿ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಡಿ ಗುಂಪಿನ ೯ನೇ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ಮತ್ತು ಕೆನಡಾ ತಂಡಗಳು ಸೆಣಸಾಟ ನಡೆಸಲಿವೆ. ಪಂದ್ಯ ರಾತ್ರಿ ೭ ಗಂಟೆಗೆ ಆರಂಭವಾಗಲಿದೆ.

**<>><><*><><<>**

ಚೀನಾದ ಟಿಯಾಂಜಿನ್‌ನಲ್ಲಿ ನಡೆದ ಏಷ್ಯನ್ ಒಳಾಂಗಣ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್‌ನಲ್ಲಿ ಭಾರತ ಐದು ಪದಕಗಳನ್ನು ಗೆದ್ದು, ಪದಕ ಪಟ್ಟಿಯಲ್ಲಿ ಆರನೇ ಸ್ಥಾನ ಪಡೆದಿದೆ. ಪುರುಷರ ಹೆಪ್ಟಾಥ್ಲಾನ್ ಸ್ಪರ್ಧೆಯನ್ನು ಗೆಲ್ಲುವ ಮೂಲಕ ತೇಜಸ್ವಿನ್ ಶಂಕರ್ ಅತ್ಯುತ್ತಮ ಪ್ರದರ್ಶನ ನೀಡಿ, ಚಿನ್ನದ ಪದಕ ಗೆದ್ದರು. ಈ ಸ್ಪರ್ಧೆಯಲ್ಲಿ ಅವರು ೫ ಸಾವಿರದ ೯೯೩ ಅಂಕಗಳನ್ನು ಗಳಿಸುವ ಮೂಲಕ ಹೊಸ ದಾಖಲೆಯನ್ನು ಸ್ಥಾಪಿಸಿದರು. ಹೈಜಂಪ್‌ನಲ್ಲಿ ಪೂಜಾ ಬೆಳ್ಳಿ ಗೆದ್ದರೆ, ಟೂರ್ ಶಾಟ್‌ಪುಟ್‌ನಲ್ಲಿ ತಜಿಂದರ್‌ಪಾಲ್ ಸಿಂಗ್ ಬೆಳ್ಳಿ ಪಡೆದರು ಹಾಗೂ ಆನ್ಸಿ ಸೋಜನ್, ಉದ್ದ ಜಿಗಿತದಲ್ಲಿ ಕಂಚಿನ ಪದಕ ಪಡೆದರು. ಚಾಂಪಿಯನ್‌ಶಿಪ್‌ನಲ್ಲಿ ಚೀನಾ ಪ್ರಾಬಲ್ಯ ಸಾಧಿಸಿದ್ದು, ೧೦ ಚಿನ್ನ, ೧೧ ಬೆಳ್ಳಿ ಮತ್ತು ೧೩ ಕಂಚು ಸೇರಿದಂತೆ ೩೪ ಪದಕಗಳೊಂದಿಗೆ ಅಂಕಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾತಾ ಪ್ರಸಾರ ಮಧ್ಯಾಹ್ನ ೨.೩೦ ಕ್ಕೆ <>*><>**